ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಕೈಗಾರಿಕಾ ಉದ್ಯಮಗಳನ್ನು ಉತ್ತೇಜಿಸುವ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

692 (844) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೋವಿಡ್ ನಂತರ ಕೈಗಾರಿಕಾ ಉದ್ಯಮವನ್ನು ಉತ್ತೇಜಿಸಲು ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಆ) ಕೆ. ಐ. ಎ. ಡಿ. ಬಿ ವತಿಯಿಂದ ಪ್ರಸ್ತುತ ಸಾಲಿನಲ್ಲಿ ಎಷ್ಟು ವಿಸ್ತೀರ್ಣದ ಜಮೀನನ್ನು ಕೈಗಾರಿಕಾ ಉದ್ದೇಶಕ್ಕಾಗಿ ಭೂಸ್ವಾಧೀನ ಪಡಿಸಿಕೊಂಡಿದೆ;

(ಇ) ಈ ರೀತಿಯಾಗಿ ಭೂಸ್ವಾಧೀನ ಪಡಿಸಿಕೊಂಡ ವಿಸ್ತೀರ್ಣದಲ್ಲಿ ಎಷ್ಟು ಜಮೀನನ್ನು ಕೈಗಾರಿಕಾ ಉದ್ದೇಶಕ್ಕೆ ನೀಡಲಾಗಿದೆ; ಇದಕ್ಕೆ ನಿಗದಿಪಡಿಸಿದ ದರವೆಷ್ಟು? (ಜಿಲ್ಲಾವಾರು ವಿವರ ನೀಡುವುದು)